ಅಮೃತಮಹಲ್ ಇಲಾಖೆ.

ನೋಟಿಫಿಕೇಷನ್.

ಕ್ಯಾಂಪು: ಮೈಸೂರು, ತಾರೀಖು 14ನೆ ನವೆಂಬರು 1909.

ಅಮೃತಮಹಲ್ ಇಲಾಖೆ ಕೆಲವು ಗಂಡು ರಾಸುಗಳನ್ನು 6—12—1909ರ ಲಾಗಾಯಿತು ಮಾಗಡಿ ತಾಲ್ಲೂಕು "ಬಗನಗೆರೆ" ಕಾವಲಿನಲ್ಲಿಯು (ಅಂದರೆ ಕುಣಿಗಲ್-ಬೆಂಗಳೂರು ರಸ್ತೆಯ 35ನೆ ಮೈಲಿಯು ಸನಿಹ) ಮತ್ತು 12—12—09ರ ಲಾಗಾಯಿತು ಆರಕೀಕೆರೆ ತಾಲ್ಲೂಕು "ಗಂಡಶಿ" ಬಂಗಾ ಬಳಿಯಲ್ಲಿಯೂ ಬಹಿರಂಗವಾಗಿ ಹರಾಜು ಮಾಡಿಸಲ್ಪಡುತ್ತೆ. ಇಷ್ಟ ವುಳ್ಳವರು ಹಾಜರಾಗಿ ಛಡಸವಾಲಿನಲ್ಲಿ ರಾಸುಗಳನ್ನು ಪಡಿಯಬಹುದು.

ಹೆಚ್. ನಂಜುಂಡಯ್ಯಾಜೀ ಆರ್ಸ್, ಸೂಪರಿಂಟೆಂಡೆಂಟ್.

ಕೋಲಾರ ಡಿಸ್ಟ್ರಿಕ್ಟ್.

ತಾರೀಖು 9ನೆ ಮಾಹೆ ನವೆಂಬರ್ 1909.

ಸಕಲ ಜನಗಳಿಗೂ ತಿಳಿಯುವ ಬಗ್ಗೆ ಇದರಿಂದ ಪ್ರಕಟಿಸಲ್ಪಡುವದೇನಂದರೆ, (ಇದರಡಿ ಕಂಡ ತಖ್ತೆಯಲ್ಲಿ ನಮೂದಿಸಿದ ಪ್ರಕಾರ) ಜೋಡಿದಾರರಿಂದ ಸರಕಾರಕ್ಕೆ ಸಲ್ಲತಕ್ಕ ಕಂದಾಯದ ಬಾಕಿ ಸಮಾಧಾನಕ್ಕೋಸ್ಕರ ಕ್ರಮಪ್ರಕಾರ ಜಫ್ತೀ ಮಾಡಲ್ಪಟ್ಟಿರುವ ಈ ಕೆಳಗೆ ಕಂಡ ಜೋಡಿ ಗ್ರಾಮವು ಇದರಡಿ ಕಂಡ ತಖ್ತೆಯಲ್ಲಿ ನಮೂದಿಸಿರುವ ಸ್ಥಳದಲ್ಲೂ ಆ ತಾರೀಖಿನಲ್ಲೂ ಬಹಿರಂಗವಾದ ಹರಾಜು ಮೂಲಕ ವಿಕ್ರಯಿಸಲ್ಪಡುವದು. ಮತ್ತು ಸದರೀ ತಾರೀಖಿನಲ್ಲಿ ಬೆಳಿಗ್ಯೆ 11 ಘಂಟೆಗೆ ಹರಾಜು ಸುರುವಾಗಿ ಉಳಿಕೆ ಯಾವದೂ ಇಲ್ಲದೆ ಗ್ರಾಮವು ಜಡದರಖಾಸ್ತುದಾರರಿಗೆ ಹರಾಜು ನಿಲ್ಲುವದು.

2. ಪರಂತು, ಒಂದು ಗ್ರಾಮವು ಬೇರೆಬೇರೆಯಾಗಿ ಮುಂಜೂರ್ಮಾಡಲ್ಪಟ್ಟ ವೃತ್ತಿಗಳಾಗಿ ವಿಂಗಡಿಸಲ್ಪಟ್ಟಿದ್ದರೆ, ಡೆಪ್ಯುಟಿ ಕಮ್ಮಿಷನರವರು ತಮ್ಮ ಯಖ್ತ್ಯಾದೀ ಮೇಲೆ ಪೂರಾ ಗ್ರಾಮವನ್ನು ವಿಕ್ರಯಿಸುವದಕ್ಕೆ ಬದಲಾಗಿ ಪ್ರತಿ ಒಂದು ವೃತ್ತಿಯನ್ನೂ ಬೇರೆಬೇರೆಯಾಗಿ ಹರಾಜು ಹಾಕಿಸುವರು.

3. ಕ್ರಯದಾರನು ಹರಾಜು ಕಾಲದಲ್ಲಿ ಕ್ರಯದ ಮೊಬಲಗು ಪೈಕಿ ಶೇಕಡಾ 25 ರೂಪಾಯಿ ಡಿಪಾಜಿಟ್ ಇಡಬೇಕಾಗಿರುತ್ತೆ. ಕ್ರಯದ ಮೊಬಲಗು ಪೈಕಿ ಬಾಕಿಯನ್ನು ಹರಾಜು ತಾರೀಖು ಲಾಗಾಯತು 15 ದಿನಗಳೊಳಗಾಗಿ ಪಾವತಿ ಮಾಡದೆ ಇದ್ದರೆ, ಡಿಪಾಜಿಟ್ ಮೊಬಲಗು ದಂಡವಾಗಿ ತೆಗದುಕೊಳ್ಳಲಿಕ್ಕೆ ಗುರಿಯಾಗತಕ್ಕದ್ದು.

4. ಅಂತಾ ಡಿಪಾಜಿಟ್ ಮೊಬಲಗನ್ನು ಕೊಡದ ಹೋದರೆ, ಅಥವಾ ಬಾಕಿ ಕ್ರಯದ ಮೊಬಲಗನ್ನು ಪಾವತಿ ಮಾಡದಿದ್ದರೆ ಜಮಿನಾನುಗಳು ಅವ್ವಲ್ ಕ್ರಯದಾರನ ಖರ್ಚಿನಲ್ಲಿ ಪುನಃ ವಾಗಿ ಮರಳಿ ಹರಾಜ್ ಹಾಕಲ್ಪಡುವವು.

5. ಹರಾಜಿನಲ್ಲಿ ದರಖಾಸ್ತು ಮಾಡತಕ್ಕವರು ತಮ್ಮ ಸ್ವಂತಕ್ಕೆ ದರಖಾಸ್ತು ಮಾಡುತ್ತಾರೆಯೋ ಯಾ ಮುತಾಲೀಕರ ತರೀಕ ದರಖಾಸ್ತು ಮಾಡುತ್ತಾರೆಯೇ ಎಂಬದನ್ನು ನಮೂದಿಸತಕ್ಕದ್ದು. ಮುತಾಲೀಕರಾಗಿದ್ದ ಪಕ್ಷಕ್ಕೆ ತಮ್ಮ ಮುಖ್ಯಸ್ಥರಿಂದ ರುಜು ಮಾಡಲ್ಪಟ್ಟ ಬರವಣಿಗೆ ಮೂಲಕವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡತಕ್ಕದ್ದು. ಹಾಗಿಲ್ಲದ ಪಕ್ಷಕ್ಕೆ ಅಂತವರ ದರಖಾಸ್ತು ತಿರಸ್ಕರಿಸಲ್ಪಡಬಹುದು.

6. ಸರ್ಕಾರದ ಹಣ ಕೊಡಲಿಕ್ಕೆ ತಪ್ಪಿದ ಮನುಷ್ಯನಾಗಲೀ ಅವನ ತರಫಿನಲ್ಲಿ ಕೆಲಸ ನಡಿಸುವ ಅಥವಾ ಜಮಿನಿನಲ್ಲಿ ತನಗೆ ಹಕ್ಕುಂಟೆಂಬ ಇತರ ಯಾವ ಮನುಷ್ಯನಾಗಲಿ, ಹರಾಜ್ ಆಗುವದಕ್ಕೆ ಮುಂಚಿತವಾಗಿ ಬಡ್ಡಿ ಯಾ ಇತರ ಖರ್ಚುಗಳು ದೇಬಿಲ್ ಕಂದಾಯದ ಬಾಕಿ ಮೊಬಲಗನ್ನು ಪೂರಾ ಹಾಜರ್ ಮಾಡಿದಾಗ್ಯೂ ಅಥವಾ ಹಿಂದಿನ ಕಂದಾಯದ ಬಾಕಿ ಮುಂತಾದ್ದು ಪಾವತಿಯಾಗಿರುತ್ತೆಂದು ತೃಪ್ತಿಕರವಾಗಿ ರುಜುವಾತು ಮಾಡಿದಾಗ್ಯೂ ಅಥವಾ ಮೈಸೂರು ಲ್ಯಾಂಡ್ ರೆವಿನ್ಯೂ ಕೋಡಿನ 170ನೆ ಸೆಕ್ಷನ್ ಅನುಸಾರವಾಗಿ ಜಾಮೀನು ಕೊಟ್ಟಾಗ್ಯೂ ಹರಾಜು ಮುಕ್ತಾಯ ಮಾಡಲ್ಪಡತಕ್ಕದ್ದು.

7. ಕ್ರಯದಾರನು ಕ್ರಯದ ಮೊಬಲಗನ್ನು ಪೂರ್ತಿಯಾಗಿ ಪಾವತಿ ಮಾಡಿ, ಹರಾಜ್ ಖಾಯಂ ಮಾಡಲ್ಪಟ್ಟು ಕೂಡಲೆ ಗ್ರಾಮವು ಆತನ ಸುಪರ್ದು ಮಾಡಲ್ಪಟ್ಟು, ಕ್ರಯದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು, ಡೆಪ್ಯುಟಿ ಕಮ್ಮಿಷನರವರಿಂದ ರುಜು ಮೊಹರ್ ಮಾಡೋಣಾದ ಬಂದು ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ತಪಶೀಲ್‌ನಲ್ಲಾಗಲಿ ಅಂದಾಜು ಬೀಜವರಿ ವಿಷಯದಲ್ಲಾಗಲಿ ಇರುವ ಗಲ್ಲತ್ತುಗಳಿಗೆ ಸರಕಾರದವರು ಜವಾಬುದಾರರಲ್ಲವೆಂದು ಸ್ಪಷ್ಟವಾಗಿ ತಿಳಿಯತಕ್ಕದ್ದು.

8. ಪರಂತು, ಸದರೀ ಹರಾಜಿನಿಂದ ನುಕ್ಸಾನ್ ಪಟ್ಟುಂತೆ ಎಣಿಸುವ ಜನಗಳು ಹರಾಜ್ ತಾರೀಖು ಲಾಗಾಯತು 90 ದಿನಗಳೊಳಗಾಗಿ ಗವರ್ನ್‌ಮೆಂಟಿಗೆ ಅಪ್ಪೀಲ್ ಮಾಡಿಕೊಳ್ಳಲಿಕ್ಕೆ ಸ್ವತಂತ್ರರಿರುತ್ತಾರೆ, ಅಂತಾ ಅಪ್ಪೀಲಿನಲ್ಲಿ ಆಗುವ ಆಖೈರು ಹುಕುಮಿಗೆ ಸದರೀ ಕ್ರಯವು ವಳಪಟ್ಟು ಇರುತ್ತೆ.

ಡಿಪ್ಯುಟಿ ಕಮ್ಮಿಷನರ್.	ತಾಲ್ಲೂಕು.	ಹೋಬಳಿ.	ಗ್ರಾಮ.	ಜೋಡಿದಾರರ ಹೆಸರು.	ಅಂದಾಜು ಬೀಜವರಿ.	ಅಂದಾಜು ಹುಟ್ಟುವಳಿಗೆ ಯಾ ಬೀರೀಜು.	ಸರಾಸರಿಯಾಗಿ ಕಂದಾಯಕ್ಕೆ ಕೊಡಬೇಕಾದ ಪೈಸೆರೇಟು.	ಯಾವ ಬಾಕಿಗೋಸ್ಕರ ಗ್ರಾಮವು ಹರಾಜ್ ಮಾಡಲ್ಪಡುತ್ತೋ ಅಂತಾ ಸರಕಾರದ ಕಂದಾಯದ ಬಾಕಿ.	ಹರಾಜು ತಾರೀಖು ವಗೈರೆ.
					ಎ. ಗು.	ರೂ. ಆ.	ರೂ.	ರೂ. ಆ. ಪೈ.	
ಕೋಲಾರ	ಚಿಕ್ಕಬಳ್ಳಾಪುರ	ಕಸಬಾ	ಜೋಡಿ ಪಣ್ಣಹಳ್ಳಿ	ಕರಗದ ರಂಗಪ್ಪ	ಪರಂಪೋಕು ... 43 13	0 12	19	98 7 0	1909ನೆ ಇಸವಿ ಡಿಸೆಂಬರು 13ನೆ ತಾ|| ಚಿಕ್ಕಬಳ್ಳಾಪುರ ಸಬ್ ಡಿವಿಜನ್ ಆಫೀಸ್ ರವರು ರೂಬರು.
					ಖುಷ್ಕಿ ... 28 7	38 0			
					ತರಿ ... 7 32	40 0			
					ಬಾಗಾಯಿತು ... 1 18	7 0			
					80 35	85 12			

ಚಕ್ಕುಬಂದಿ.

ಚತುರ್ಹದ್ದಿನಲ್ಲೂ ಕಳವರಿ ಗ್ರಾಮದ ಗಡಿ.

ಎ. ವೇದಾಂತದೇಸಿಗಂ ಐಯಂಗಾರ್, ಫಾರ್ ಡೆಪ್ಯುಟಿ ಕಮಿಷನರ್.